**<u>ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಚಿಂತಾಮಣಿ.</u>**

**<u>ಸಿ.ಸಿ.ನಂ. 812/2018</u>**

**<u>ಫಿರ್ಯಾದುದಾರರು</u>** : ಚಿಂತಾಮಣಿ ಗ್ರಾಮಾಂತರ ಪೋಲೀಸ್ ಠಾಣೆ

ವಿರುದ್ಧ

**<u>ಆರೋಪಿತರು</u>** : ಎ 1. ಹರಿಪ್ರಸಾದ್ ಬಿನ್ ಮುನಿರಾಜು
ವಯಾಃ 38 ವರ್ಷ,

ಎ 2. ಆಂಜಪ್ಪ ಬಿನ್ ವೆಂಕಟಪ್ಪ,
ವಯಾಃ 2348 ವರ್ಷ,

ಎ 3. ಶ್ರೀಶೀಲಾ ಕೋಂ ಆಂಜಪ್ಪ,
ವಯಾಃ 38 ವರ್ಷ,

ಆರೋಪಿ 1 ರಿಂದ 3 ರವರ
ವಾಸಃ ಪಣಸಚೌಡನಹಳ್ಳಿ ಗ್ರಾಮ,
ಚಿಂತಾಮಣಿ ತಾಲ್ಲೂಕು,
ಚಿಕ್ಕಬಳ್ಳಾಪುರ ಜಿಲ್ಲೆ.

: **<u>ದೋಷಾರೋಪಣೆ</u>** :

**ಶ್ರೀಮತಿ.ಹರ್ಷಿತ, ಬಿ.ಎ., ಎಲ್‌ಎಲ್.ಬಿ.,** ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ., ಆದ ನಾನು ಈ ಮೂಲಕ ಆರೋಪಿತರಾದ ನಿಮ್ಮನ್ನು ಈ ಕೆಳಕಂಡಂತೆ ಆರೋಪಕ್ಕೆ ಗುರಿಪಡಿಸುತ್ತೇನೆ.

ದಿನಾಂಕ 15-09-2018 ರಂದು ಸಂಜೆ 05.00 ರ ಸಮಯದಲ್ಲಿ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣಾ ಸರಹದ್ದು ಪಣಸಚೌಡನಹಳ್ಳಿ ಗ್ರಾಮದ ಚಾಸಾ-1 ರವರು 1 ನೇ ಆರೋಪಿಯ ಮನೆಯ ಬಳಿ ಹೋಗಿ 1 ನೇ ಆರೋಪಿಯಾದ ನೀವು ಕೊಡಬೇಕಾದ ಸಾಲದ ಹಣವನ್ನು ವಾಪಸ್ಸು ಕೊಡುವಂತೆ ಕೇಳಿದಾಗ 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಕುರಿತು ಲೋಫರ್ ಮುಂಡೆ ನಾನು ನಿನ್ನ ಗಂಡನ ಹತ್ತಿರ ವ್ಯವಹಾರ ಮಾಡಿರುವುದು ನೀನು ಯಾರು ದೂಡ್ಡು ಕೇಳುವುದಕ್ಕೆ ಎಂದು ಚಾಸಾ-1 ರವರನ್ನು ಅವ್ಯಾಚ್ಯ ಶಬ್ದಗಳಿಂದ ಬೈದಿದ್ದು, ಹಾಗೂ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ ಚಾಸಾ-1 ರವರ ಮೆಲೆ ಜಗಳ ತೆಗೆದು ಸೂಳೆ ಮುಂಡೆ ಎಂದು ಅವ್ಯಾಚ್ಯ ಶಬ್ದಗಳಿಂದ ಬೈದಿರುತ್ತೀರಿ, ಆ ಮೂಲಕ **ಭಾ. ದಂ.ಸಂ. ಕಲಂ 504 ಸಹವಾಚಕ ಕಲಂ 34** ರಡಿಯಲ್ಲಿ

ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ ಎಂದು ದೋಷಾರೋಪಣೆ ಸಲ್ಲಿಸಲಾಗಿದೆ.

**ಎರಡನೇಯದಾಗಿ** ಅದೇ ದಿನ, ಅದೇ ಸಂಬಂಧವಾಗಿ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ ಸಂಜೆ 05.30 ರ ಸಮಯದಲ್ಲಿ ಚಾಸಾ–1 ರವರ ಮನೆಯ ಬಳಿ ಬಂದು ಆ ಪೈಕಿ 1 ನೇ ಆರೋಪಿಯಾದ ನೀವು ತನ್ನ ಕೈಯಲ್ಲಿದ್ದ ಚಾಕುವಿನಿಂದ ಚಾಸಾ–1 ರವರ ಎಡಕೈಗೆ ಹೊಡೆದು ಸಾಮಾನ್ಯ ಸ್ವರೂಪದ ರಕ್ತಗಾಯವನ್ನುಂಟು ಮಾಡಿದ್ದು, 2 ನೇ ಆರೋಪಿಯಾದ ನೀವು ಕೈಯಲ್ಲಿದ್ದ ದೊಣ್ಣೆಯಿಂದ ಚಾಸಾ–1 ರವರ ಬಲಗಾಲಿನ ತೊಡೆಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿರುತ್ತೀರಿ, ಆ ಮೂಲಕ ಭಾ.ದಂ.ಸಂ.ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ ಎಂದು ದೋಷಾರೋಪಣೆ ಸಲ್ಲಿಸಲಾಗಿದೆ.

**ಮೂರನೇಯದಾಗಿ**, ಅದೇ ದಿನ, ಅದೇ ಸಮಯ ಮತ್ತು ಅದೇ ಸ್ಥಳದಲ್ಲಿ, ಅದೇ ಸಂಬಂಧವಾಗಿ 3 ನೇ ಆರೋಪಿಯಾದ ನೀವು ಚಾಸಾ–1 ರವರ ಮೈಮೇಲೆ ಕೈಗಳಿಂದ ಹೊಡೆದು ನೋವುಂಟು ಮಾಡಿರುತ್ತೀರಿ, ಆ ಮೂಲಕ ನೀವು ಭಾ.ದಂ.ಸಂ.ಕಲಂ 323 ಸಹವಾಚಕ ಕಲಂ 34 ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ ಎಂದು ದೋಷಾರೋಪಣೆ ಸಲ್ಲಿಸಲಾಗಿದೆ.

**ಕೊನೇಯದಾಗಿ**, ಅದೇ ದಿನ, ಅದೇ ಸಮಯ ಮತ್ತು ಅದೇ ಸ್ಥಳದಲ್ಲಿ, ಅದೇ ಸಂಬಂಧವಾಗಿ 1 ರಿಂದ 3 ನೇ ಆರೋಪಿತರಾದ ನೀವುಗಳು ಚಾಸಾ–1 ರವರನ್ನು ಕುರಿತು ಇನ್ನೊಂದು ಸಲ ನಮ್ಮ ಮನೆ ಬಳಿ ಬಂದು ದುಡ್ಡು ಕೇಳಿದರೆ ನಿನ್ನನ್ನು ಇಲ್ಲಿಯೇ ಹೂತು ಬಿಡುವುದಾಗಿ ಪ್ರಾಣ ಬೆದರಿಕೆ ಹಾಕಿರುತ್ತೀರಿ, ಆ ಮೂಲಕ ಭಾ.ದಂ.ಸಂ.ಕಲಂ 506 ಸಹವಾಚಕ ಕಲಂ 34 ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ ಎಂದು ದೋಷಾರೋಪಣೆ ಸಲ್ಲಿಸಲಾಗಿದೆ.

ಸದರಿ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದಿಂದ ಆರೋಪ ವಿಚಾರಣೆಗೆ ಗುರಿಯಾಗತಕ್ಕದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

(ಆರೋಪಿಗಳ ವಿಚಾರಣೆಯನ್ನು ನನ್ನ ಹಾಜರಾತಿಯಲ್ಲಿ ತೆಗೆದುಕೊಂಡು, ಆಪಾಧಾನೆಗಳನ್ನು ಅವರಿಗೆ ವಿವರವಾಗಿ ಓದಿ ಹೇಳಿದ ಮೇಲೆ ಅದನ್ನು ನನ್ನ ವೈಯಕ್ತಿಕ ಸುನಾವಣೆಯಲ್ಲಿ ದಾಖಲಿಸಿದ್ದು ಆಪಾಧನೆಗಳು ಪೂರ್ಣಶಃ ಸರಿಯಾದ ಹೇಳಿಕೆಯಾಗಿದೆ.)

**ಸ್ಥಳಃ ಚಿಂತಾಮಣಿ.** **ಸಹಿ/–**

**ದಿನಾಂಕಃ** 05.06.2026. **ಅಪರ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ., ಚಿಂತಾಮಣಿ.**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಚಿಂತಾಮಣಿ.**

**ಸಿ.ಸಿ.ನಂ. 812/2018**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿಃ

ಚಿಂತಾಮಣಿ ಗ್ರಾಮಾಂತರ ಪೋಲೀಸ್ ಠಾಣೆ

ವಿರುದ್ಧ

**ಆರೋಪಿಃ** ಎ 1. ,ಹರಿಪ್ರಸಾದ್ ಬಿನ್ ಮುನಿರಾಜು

1. ನೀವು ಮೇಲಿ ಓದಿ ಹೇಳಿದ ಮತ್ತು ವಿವರಿಸಿದ ದೋಷಾರೋಪಣೆಯನ್ನು ಅರ್ಥೈಸಿಕೊಂಡಿರುವಿರೋ ?

ಉತ್ತರಃ

2. ಮೇಲೆ ಮಾಡಿದ ಆಪಾಧನೆಗಳನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

(ಆರೋಪಿಯ ವಿಚಾರಣೆಯನ್ನು ನನ್ನ ಹಾಜರಾತಿಯಲ್ಲಿ ತೆಗೆದುಕೊಂಡು, ಆಪಾಧಾನೆಗಳನ್ನು ಅವರಿಗೆ ವಿವರವಾಗಿ ಓದಿ ಹೇಳಿದ ಮೇಲೆ ಅದನ್ನು ನನ್ನ ವೈಯಕ್ತಿಕ ಸುನಾವಣೆಯಲ್ಲಿ ದಾಖಲಿಸಿದ್ದು ಆಪಾಧನೆಗಳು ಪೂರ್ಣಶಃ ಸರಿಯಾದ ಹೇಳಿಕೆಯಾಗಿದೆ.)

**ಸ್ಥಳಃ ಚಿಂತಾಮಣಿ.**

**ದಿನಾಂಕಃ** 05.06.2026 **ಸಹಿ/–**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**

**ಚಿಂತಾಮಣಿ.**

ಆರೋಪಿ ಸಹಿಃ

**<u>ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಚಿಂತಾಮಣಿ.</u>**

**<u>ಸಿ.ಸಿ.ನಂ. 812/2018</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿಃ
ಚಿಂತಾಮಣಿ ಗ್ರಾಮಾಂತರ ಪೋಲೀಸ್ ಠಾಣೆ

ವಿರುದ್ಧ

**<u>ಆರೋಪಿಃ</u>** ಎ 2. ಆಂಜಪ್ಪ ಬಿನ್ ವೆಂಕಟಪ್ಪ,

1. ನೀವು ಮೇಲಿ ಓದಿ ಹೇಳಿದ ಮತ್ತು ವಿವರಿಸಿದ ದೋಷಾರೋಪಣೆಯನ್ನು ಅರ್ಥೈಸಿಕೊಂಡಿರುವಿರೋ ?

ಉತ್ತರಃ

2. ಮೇಲೆ ಮಾಡಿದ ಆಪಾಧನೆಗಳನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

(ಆರೋಪಿಯ ವಿಚಾರಣೆಯನ್ನು ನನ್ನ ಹಾಜರಾತಿಯಲ್ಲಿ ತೆಗೆದುಕೊಂಡು, ಆಪಾಧಾನೆಗಳನ್ನು ಅವರಿಗೆ ವಿವರವಾಗಿ ಓದಿ ಹೇಳಿದ ಮೇಲೆ ಅದನ್ನು ನನ್ನ ವೈಯಕ್ತಿಕ ಸುನಾವಣೆಯಲ್ಲಿ ದಾಖಲಿಸಿದ್ದು ಆಪಾಧನೆಗಳು ಪೂರ್ಣಶಃ ಸರಿಯಾದ ಹೇಳಿಕೆಯಾಗಿದೆ.)

**ಸ್ಥಳಃ ಚಿಂತಾಮಣಿ.**
**ದಿನಾಂಕಃ** 05.06.2026

**ಸಹಿ/–**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ಚಿಂತಾಮಣಿ.**

ಆರೋಪಿ ಸಹಿಃ

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಚಿಂತಾಮಣಿ.**

**ಸಿ.ಸಿ.ನಂ. 812/2018**

**ಫಿರ್ಯಾದುದಾರರು:** ಸರ್ಕಾರದ ಪರವಾಗಿಃ

ಚಿಂತಾಮಣಿ ಗ್ರಾಮಾಂತರ ಪೋಲೀಸ್ ಠಾಣೆ

ವಿರುದ್ಧ

**ಆರೋಪಿಃ** ಎ 3. ಶ್ರೀಶೀಲಾ ಕೋಂ ಆಂಜಪ್ಪ,

1. ನೀವು ಮೇಲಿ ಓದಿ ಹೇಳಿದ ಮತ್ತು ವಿವರಿಸಿದ ದೋಷಾರೋಪಣೆಯನ್ನು ಅರ್ಥೈಸಿಕೊಂಡಿರುವಿರೋ ?

ಉತ್ತರಃ

2. ಮೇಲೆ ಮಾಡಿದ ಆಪಾಧನೆಗಳನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

(ಆರೋಪಿಯ ವಿಚಾರಣೆಯನ್ನು ನನ್ನ ಹಾಜರಾತಿಯಲ್ಲಿ ತೆಗೆದುಕೊಂಡು, ಆಪಾಧಾನೆಗಳನ್ನು ಅವರಿಗೆ ವಿವರವಾಗಿ ಓದಿ ಹೇಳಿದ ಮೇಲೆ ಅದನ್ನು ನನ್ನ ವೈಯಕ್ತಿಕ ಸುನಾವಣೆಯಲ್ಲಿ ದಾಖಲಿಸಿದ್ದು ಆಪಾಧನೆಗಳು ಪೂರ್ಣಶಃ ಸರಿಯಾದ ಹೇಳಿಕೆಯಾಗಿದೆ.)

**ಸ್ಥಳಃ ಚಿಂತಾಮಣಿ.**

**ದಿನಾಂಕಃ** 05.06.2026

**ಸಹಿ/–**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**

**ಚಿಂತಾಮಣಿ.**

ಆರೋಪಿ ಸಹಿಃ